**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ: DTE-ADMI0SCH2/2/2024

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ,
ಬೆಂಗಳೂರು - 560 001.
ದಿನಾಂಕ: 10-07-2024.

**-:: ಸುತ್ತೋಲೆ ::-**

**ವಿಷಯ :** ರಾಜ್ಯ ಎಲ್ಲಾ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಮತ್ತು ರೂ.2.50 ಲಕ್ಷದಿಂದ ರೂ.10.00 ಲಕ್ಷ ಒಳಗಿರುವ ಹಾಗೂ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯ ಮಾಡದೇ ಇರುವ ಬಗ್ಗೆ.

**ಉಲ್ಲೇಖ :**
1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: SWD-SCHCOSC/119/14330520/2024, D: 20-06-2024.
2. ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಆದೇಶ ಸಂಖ್ಯೆ: SWD/EDU/ED3/91/2023 (Com: 1098854), D: 03-07-2023.

**-000000-**

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಸಮಾಜ ಕಲ್ಯಾಣ ಇಲಾಖೆಯಿಂದ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದೊಳಗಿರುವ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರ ವಿದ್ಯಾರ್ಥಿವೇತನ ಯೋಜನೆ ಅಡಿ ಆಯಾಯ ಕೋರ್ಸಿಗೆ ಸರ್ಕಾರ ನಿಗಧಿಪಡಿಸಿರುವ ದರಗಳಲ್ಲಿ ಕಡ್ಡಾಯ ಶುಲ್ಕಗಳನ್ನು ವಿದ್ಯಾರ್ಥಿವೇತನಕ್ಕೆ ಅರ್ಜಿಯನ್ನು ಸಲ್ಲಿಸಿದ ವಿದ್ಯಾರ್ಥಿಗಳಿಗೆ ಮರುಪಾವತಿ ಮಾಡಲಾಗುತ್ತಿದೆ.

ಮುಂದುವರೆದು, ಉಲ್ಲೇಖ(2)ರ ಸಮಾಜ ಕಲ್ಯಾಣ ಇಲಾಖೆಯು 2023-24ನೇ ಸಾಲಿನಿಂದ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಹಾಗೂ ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳ ಸಂಬಂಧ ದಾಖಲಾತಿ ಸಮಯದಲ್ಲಿ ಮರುಪಾವತಿಸಲಾಗುವ ಯಾವುದೇ ಕಡ್ಡಾಯ ಶುಲ್ಕಗಳನ್ನು ಪಾವತಿ ಮಾಡಲು ಒತ್ತಾಯ ಮಾಡದಂತೆಯೂ ಹಾಗೂ ಸದರಿ ಕಡ್ಡಾಯ ಶುಲ್ಕಗಳನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದ ಮೂಲಕ ಮಂಜೂರು ಮಾಡಿದ ನಂತರದಲ್ಲಿ ಕಾಲೇಜಿಗೆ ಮರುಪಾವತಿ ಮಾಡಿಸಿಕೊಳ್ಳುವಂತೆ ಆದೇಶ ಹೊರಡಿಸಲಾಗಿದೆ. ಆದಾಗ್ಯೂ ಸಂಸ್ಥೆಯವರು ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಮಯದಲ್ಲಿ ಕಡ್ಡಾಯ ಶುಲ್ಕಗಳನ್ನು ಪಾವತಿ ಮಾಡುವಂತೆ ಒತ್ತಾಯ ಮಾಡುತ್ತಿರುವುದಾಗಿ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿಗಳು/ಪೋಷಕರು ಅನೇಕ ದೂರುಗಳನ್ನು ಸಲ್ಲಿಸಿರುತ್ತಾರೆ.

ಆದ್ದರಿಂದ, ಪ್ರಸುತ್ತ ಸಾಲಿನಿಂದ ತಾಂತ್ರಿಕ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಖಾಸಗಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರವೇಶ ಬಯಸುವ ಕುಟುಂಬದ ವಾರ್ಷಿಕ ಆದಾಯ **ರೂ.2.50** ಲಕ್ಷ ಒಳಗಿರುವ ಮತ್ತು **ರೂ.2.50** ಲಕ್ಷದಿಂದ **ರೂ.10.00** ಲಕ್ಷ ಒಳಗಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು, ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿದ್ದರೆ, ಅಂತಹ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಮಯದಲ್ಲಿ ಯಾವುದೇ ಕಡ್ಡಾಯ ಶುಲ್ಕಗಳನ್ನು ಪಾವತಿ ಮಾಡಲು ಒತ್ತಾಯ ಮಾಡಬಾರದು ಹಾಗೂ ಒಂದು ವೇಳೆ ಸರ್ಕಾರಿ ಆದೇಶದ ವಿರುದ್ಧವಾಗಿ ಕಡ್ಡಾಯ ಶುಲ್ಕಗಳನ್ನು ಒತ್ತಾಯ ಮಾಡಿದ್ದಲ್ಲಿ, ಅಂತಹ ಸಂಸ್ಥೆಗಳ ವಿರುದ್ಧ ಸಮಾಜ ಕಲ್ಯಾಣ ಇಲಾಖೆ ಇವರಿಂದ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂಬ ಅಂಶವನ್ನು ತಮ್ಮ ಗಮನಕ್ಕೆ ತರಲಾಗಿದೆ.

*"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"*

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ,

1. ಪ್ರಾಂಶುಪಾಲರು, ರಾಜ್ಯ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಿಗೆ - ಮುಂದಿನ ಸೂಕ್ತ ಕ್ರಮಕ್ಕಾಗಿ.
2. **ಇ-ಆಡಳಿತ ವಿಭಾಗ,** ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸುವುದು)